# All India Radio: Bangalore
# National Bulletin In Kannada
# 20.05.2026  1.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**20.05.2026  1.10 p.m**

**<><><><>**

ಮುಖ್ಯಾಂಶಗಳು

1. ರೋಮ್‌ನಲ್ಲಿ ಇಂದು ಇಟಲಿ ಪ್ರಧಾನಿಯೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿರುವ ಪ್ರಧಾನಿ ನರೇಂದ್ರ ಮೋದಿ
2. ದಕ್ಷಿಣ ಕೊರಿಯಾ ರಕ್ಷಣಾ ಸಚಿವರೊಂದಿಗೆ ಸಚಿವ ರಾಜನಾಥ್ ಸಿಂಗ್ ಮಾತುಕತೆ; ಸಹಕಾರ ಬಲವರ್ಧನೆಗೆ ಒತ್ತು
3. ಜಾಗತಿಕ ಬಿಕ್ಕಟ್ಟಿನ ನಡುವೆ ಭಾರತ, ವಿಶ್ವದಲ್ಲೇ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯಾಗಿ ಮುಂದುವರಿಯಲಿದೆ - ವಿಶ್ವಸಂಸ್ಥೆ
4. ಇಂದು ವಿಶ್ವ ಮಾಪನಶಾಸ್ತ್ರ ದಿನ ; ಗ್ರಾಹಕರ ಹಿತರಕ್ಷಣೆ ಮತ್ತು ಪಾರದರ್ಶಕ ಮಾರುಕಟ್ಟೆಗೆ ಸರ್ಕಾರ ಬದ್ಧ- ಸಚಿವ ಪ್ರಲ್ಹಾದ್ ಜೋಶಿ
5. ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ಕೋಲ್ಕತ್ತಾ ನೈಟ್ ರೈಡರ್ಸ್ -ಮುಂಬೈ ಇಂಡಿಯನ್ಸ್ ಮುಖಾಮುಖಿ

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದು, ಉಭಯ ದೇಶಗಳ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವ ಕುರಿತು ಚರ್ಚಿಸಲಿದ್ದಾರೆ. ನಿನ್ನೆ ರಾತ್ರಿ ರೋಮ್‌ಗೆ ಆಗಮಿಸಿದ ಪ್ರಧಾನಿ ನರೇಂದ್ರ ಮೋದಿ, ಪ್ರಧಾನಿ ಮೆಲೋನಿ ಅವರೊಂದಿಗೆ ಔತಣಕೂಟದಲ್ಲಿ ಭಾಗವಹಿಸಿದ ಬಳಿಕ ಖ್ಯಾತ 'ಕೊಲೋಸಿಯಮ್' ಸ್ಮಾರಕಕ್ಕೆ ಭೇಟಿ ನೀಡಿದರು. ಈ ವೇಳೆ ಉಭಯ ನಾಯಕರು ವಿವಿಧ ಜಾಗತಿಕ ವಿದ್ಯಮಾನಗಳ ಕುರಿತು ಪರಸ್ಪರ ವಿಚಾರ ವಿನಿಮಯ ಮಾಡಿಕೊಂಡಿದ್ದು, ಇಂದಿನ ಮಾತುಕತೆಗಳು ಭಾರತ-ಇಟಲಿ ಸ್ನೇಹ ಸಂಬಂಧವನ್ನು ಮತ್ತೊಂದು ಎತ್ತರಕ್ಕೆ ಕೊಂಡೊಯ್ಯಲಿವೆ ಎಂದು ಪ್ರಧಾನಿ ಸಾಮಾಜಿಕ ಮಾಧ್ಯಮದಲ್ಲಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಪ್ರಧಾನಿ ಮೋದಿ ಅವರು

ಇಟಲಿ ಪ್ರಧಾನಿ ಮೆಲೋನಿ ಹಾಗೂ ಅಧ್ಯಕ್ಷ ಸೆರ್ಗಿಯೋ ಮಟ್ಟರೆಲ್ಲಾ ಅವರೊಂದಿಗೆ ನಡೆಸಲಿರುವ ಈ ಮಾತುಕತೆಯಲ್ಲಿ ಪ್ರಮುಖವಾಗಿ ಭಾರತ-ಮಧ್ಯಪ್ರಾಚ್ಯ-ಯುರೋಪ್ ಆರ್ಥಿಕ ಕಾರಿಡಾರ್ ಯೋಜನೆಗೆ ಹೆಚ್ಚಿನ ಒತ್ತು ನೀಡಲಾಗುವುದು. ಇದರೊಂದಿಗೆ, ಉಭಯ ದೇಶಗಳ ನಡುವಿನ 'ಜಂಟಿ ಕಾರ್ಯತಂತ್ರದ ಕ್ರಿಯಾ ಯೋಜನೆ ೨೦೨೫-೨೦೨೯' ರ ಅನುಷ್ಠಾನದ ಪ್ರಗತಿಯನ್ನು ಪರಿಶೀಲಿಸಲಾಗುವುದು. ಪ್ರಧಾನಿಯವರು ರೋಮ್‌ನಲ್ಲಿರುವ ವಿಶ್ವಸಂಸ್ಥೆಯ ಆಹಾರ ಮತ್ತು ಕೃಷಿ ಸಂಸ್ಥೆಯ ಪ್ರಧಾನ ಕಚೇರಿಗೂ ಭೇಟಿ ನೀಡಲಿದ್ದಾರೆ. ಇತ್ತೀಚಿನ ವರ್ಷಗಳಲ್ಲಿ ಭಾರತ ಮತ್ತು ಇಟಲಿ ನಡುವಿನ ಸಂಬಂಧವು ಅಭೂತಪೂರ್ವ ವೇಗವನ್ನು ಪಡೆದುಕೊಂಡಿದೆ. ಈ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಪ್ರಧಾನಿ ಜಾರ್ಜಿಯಾ ಮೆಲೋನಿ ಅವರು ಜಂಟಿಯಾಗಿ ಬರೆದಿರುವ ಲೇಖನವೊಂದರಲ್ಲಿ, ಉಭಯ ದೇಶಗಳ ಸಾಂಪ್ರದಾಯಿಕ ಸ್ನೇಹವು ಪ್ರಸ್ತುತ ಸ್ವಾತಂತ್ರ್ಯ, ಪ್ರಜಾಪ್ರಭುತ್ವದ ಮೌಲ್ಯಗಳು ಹಾಗೂ ಭವಿಷ್ಯದ ಜಂಟಿ ದೂರದೃಷ್ಟಿಯ ಆಧಾರದ ಮೇಲೆ 'ವಿಶೇಷ ಕಾರ್ಯತಂತ್ರದ ಪಾಲುದಾರಿಕೆಯಾಗಿ ರೂಪಾಂತರಗೊಂಡಿದೆ ಎಂದು ತಿಳಿಸಿದ್ದಾರೆ.

<><><>

ರತೀಯ ಸಂಸ್ಕೃತಿಯ ಕುರಿತಂತೆ ಇಟಲಿಯ ಹೆಸರಾಂತ ವರ್ಣಚಿತ್ರಕಾರ ಜಿಯಾಂಪಾಲೊ ಟೊಮಾಸೆಟ್ಟಿ ಅವರ ಕಲಾಪ್ರೇಮವನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಇಟಲಿ ಪ್ರವಾಸದ ಅವಧಿಯಲ್ಲಿ ಪ್ರಧಾನಿಯವರಿಗೆ ಟೊಮಾಸೆಟ್ಟಿ ಅವರು ವಾರಾಣಸಿಯ ಕುರಿತಾದ ತಮ್ಮ ಕಲಾಕೃತಿಯನ್ನು ಉಡುಗೊರೆಯಾಗಿ ನೀಡಿದ್ದಾರೆ. ಟೊಮಾಸೆಟ್ಟಿ ಅವರು ಕಳೆದ ನಾಲ್ಕು ದಶಕಗಳಿಂದ ಭಾರತೀಯ ಸಂಸ್ಕೃತಿಯ ಬಗ್ಗೆ ಅಪಾರ ಒಲವು ಹೊಂದಿದ್ದು, ೧೯೮೦ರ ದಶಕದಲ್ಲಿ ವೈದಿಕ ಸಂಸ್ಕೃತಿಯ ಪುಸ್ತಕಗಳಿಗೆ ಚಿತ್ರಕಾರರಾಗಿ ತಮ್ಮ ಪಯಣ ಆರಂಭಿಸಿದ್ದರು. ಇದರ ಜೊತೆಗೆ ೨೦೦೮ ರಿಂದ ೨೦೧೩ರ ಅವಧಿಯಲ್ಲಿ ಅವರು ಮಹಾಭಾರತ ಮಹಾಕಾವ್ಯವನ್ನು ಆಧರಿಸಿ ೨೩ ಬೃಹತ್ ವರ್ಣಚಿತ್ರಗಳನ್ನು ಚಿತ್ರಿಸಿದ್ದಾರೆ ಎಂದು ಪ್ರಧಾನಿ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಮತ್ತೊಂದು ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ, ಭಾರತೀಯ ನೃತ್ಯ ಪ್ರಕಾರಗಳ ಬಗ್ಗೆ ಇಟಲಿಯ ಐದು ಮಂದಿ ನೃತ್ಯ ಕಲಾವಿದರು ಹೊಂದಿರುವ ಆಸಕ್ತಿಯನ್ನು ಪ್ರಧಾನಿ ಮೋದಿ ಶ್ಲಾಘಿಸಿದ್ದಾರೆ.

<><><>

ರಕ್ಷಣಾ ಸಚಿವ ರಾಜನಾಥ್ ಸಿಂಗ್, ಸಿಯೋಲ್‌ನಲ್ಲಿ ಇಂದು ದಕ್ಷಿಣ ಕೊರಿಯಾದ ರಕ್ಷಣಾ ಸಚಿವ ಆನ್ ಗ್ಯು ಬ್ಯಾಕ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಸಭೆಯಲ್ಲಿ ಉಭಯ ದೇಶಗಳ ರಕ್ಷಣಾ ಉದ್ಯಮ, ಕಾರ್ಯತಂತ್ರದ ಸಹಕಾರ ಹಾಗೂ ಪ್ರಾದೇಶಿಕ ಶಾಂತಿಗೆ ಒತ್ತು ನೀಡಲಾಯಿತು. ಈ ಸಂದರ್ಭದಲ್ಲಿ ರಕ್ಷಣಾ ಸೈಬರ್ ಸಹಕಾರವನ್ನು ಉತ್ತೇಜಿಸುವ ಪ್ರಮುಖ ಒಪ್ಪಂದಗಳು ಹಾಗೂ ಭಾರತದ ರಾಷ್ಟ್ರೀಯ ರಕ್ಷಣಾ ಕಾಲೇಜು ಮತ್ತು ಕೊರಿಯಾ ರಾಷ್ಟ್ರೀಯ ರಕ್ಷಣಾ ವಿಶ್ವವಿದ್ಯಾಲಯಗಳ ನಡುವೆ ತಿಳುವಳಿಕಾ ಪತ್ರಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು. ಇದಕ್ಕೂ ಮುನ್ನ ಕೊರಿಯಾದ ರಾಷ್ಟ್ರೀಯ ಸ್ಮಾರಕಕ್ಕೆ ಭೇಟಿ ನೀಡಿದ ಸಚಿವ ರಾಜನಾಥ್ ಸಿಂಗ್, ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ವೀರ ಯೋಧರಿಗೆ ಪುಷ್ಪನಮನ ಸಲ್ಲಿಸಿದರು. ವೀರ ಯೋಧರ ತ್ಯಾಗ ಮತ್ತು ದೇಶಪ್ರೇಮ ಸದಾ ಪ್ರೇರಣಾದಾಯಕವಾಗಿದ್ದು, ಭಾರತವು ದಕ್ಷಿಣ ಕೊರಿಯಾದೊಂದಿಗೆ ಸದಾ ಒಗ್ಗಟ್ಟಿನಿಂದ ನಿಲ್ಲುತ್ತದೆ ಎಂದು ಅವರು ತಿಳಿಸಿದರು.

<><><><>

ಪಶ್ಚಿಮ ಏಷ್ಯಾ ಸಂಘರ್ಷದ ಜಾಗತಿಕ ಬಿಕ್ಕಟ್ಟಿನ ನಡುವೆಯೂ ಭಾರತ, ಪ್ರಸಕ್ತ ವರ್ಷ ಶೇಕಡಾ ೬.೪ ರಷ್ಟು ಆರ್ಥಿಕ ಪ್ರಗತಿ ಸಾಧಿಸುವ ಮೂಲಕ ವಿಶ್ವದಲ್ಲೇ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿ ಮುಂದುವರಿಯಲಿದೆ ಎಂದು ವಿಶ್ವಸಂಸ್ಥೆ ತಿಳಿಸಿದೆ. ವಿಶ್ವಸಂಸ್ಥೆಯ ವಿಶ್ವ ಆರ್ಥಿಕ ಪರಿಸ್ಥಿತಿ ಮತ್ತು ಭವಿಷ್ಯ ಕುರಿತ ಮಧ್ಯಾವಧಿ ವರದಿ ಕುರಿತ ಸುದ್ದಿಗೋಷ್ಠಿಯಲ್ಲಿ ಮಾತನಾಡಿರುವ ವಿಶ್ವಸಂಸ್ಥೆಯ ಜಾಗತಿಕ ಆರ್ಥಿಕ ಮೇಲ್ವಿಚಾರಣಾ ಪೀಠದ ಹಿರಿಯ ಆರ್ಥಿಕ ತಜ್ಞ ಇಂಗೋ ಪಿಟರ್ಲೆ, ಗ್ರಾಹಕರ ಬೇಡಿಕೆ, ಸಾರ್ವಜನಿಕ ಹೂಡಿಕೆ ಮತ್ತು ಸೇವಾ ವಲಯದ ರಫ್ತು ದೇಶದ ಈ ಸದೃಢ ಬೆಳವಣಿಗೆಗೆ ಪ್ರಮುಖ ಕಾರಣಗಳಾಗಿವೆ ಎಂದಿದ್ದಾರೆ. ವಿಶ್ವಸಂಸ್ಥೆಯ ಆರ್ಥಿಕ ವಿಶ್ಲೇಷಣೆ ಮತ್ತು ನೀತಿ ನಿರ್ಧಾರ ವಿಭಾಗದ ನಿರ್ದೇಶಕ ಶಾಂತನು ಮುಖರ್ಜಿ ಮಾತನಾಡಿ, ಪಶ್ಚಿಮ ಏಷ್ಯಾ ಸಂಘರ್ಷದಿಂದ ಉಂಟಾಗಿರುವ ಜಾಗತಿಕ ಬಿಕ್ಕಟ್ಟನ್ನು ನಿಭಾಹಿಸುವ ಸಾಮರ್ಥ್ಯ ಭಾರತಕ್ಕಿದೆ. ಭಾರತವು ವೈವಿಧ್ಯಮಯ ಇಂಧನ ಮೂಲಗಳು, ಬಲಿಷ್ಠ ಸಂಸ್ಕರಣಾ ಮೂಲಸೌಕರ್ಯ, ಗಣನೀಯ ವಿದೇಶಿ ವಿನಿಮಯ ಮೀಸಲು ಮತ್ತು ಇಂಧನ ಬೆಲೆಗಳನ್ನು ನಿಯಂತ್ರಿಸುವ ಆರ್ಥಿಕ ಶಕ್ತಿಯನ್ನು ಹೊಂದಿರುವುದರಿಂದ ಕಚ್ಚಾ ತೈಲ ಬೆಲೆ ಏರಿಕೆಯ ನೇರ ಪರಿಣಾಮವನ್ನು ತಡೆಯಬಹುದು ಎಂದು ಅವರು ವಿವರಿಸಿದ್ದಾರೆ.

<><><><>

ಗ್ರಾಹಕರ ಹಿತರಕ್ಷಣೆ ಮತ್ತು ಕೈಗಾರಿಕಾ ನಿಖರತೆಯನ್ನು ಬಲಪಡಿಸಲು ಕಾನೂನು ಮಾಪನಶಾಸ್ತ್ರ ಅತ್ಯಗತ್ಯವಾಗಿದ್ದು, ನಿಯಂತ್ರಣಗಳ ಹೊರೆಯನ್ನು ಕಡಿಮೆ ಮಾಡುವ ಮೂಲಕ ಮಾರುಕಟ್ಟೆಯಲ್ಲಿ ಪಾರದರ್ಶಕತೆ ಹೆಚ್ಚಿಸಲು ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. 'ವಿಶ್ವ ಮಾಪನಶಾಸ್ತ್ರ ದಿನ ೨೦೨೫' ಅಂಗವಾಗಿ ವರ್ಚುವಲ್ ಮೂಲಕ ನಡೆದ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ಭಾರತೀಯ ಉತ್ಪನ್ನಗಳ ಗುಣಮಟ್ಟವು ಜಾಗತಿಕ ಮಟ್ಟಕ್ಕೆ ಅನುಗುಣವಾಗಿರಬೇಕು ಎಂಬುದು ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯಾಗಿದೆ ಎಂದರು. ಈ ವರ್ಷದ ಘೋಷಾವಾಕ್ಯವಾದ "ಮಾಪನಶಾಸ್ತ್ರ: ನೀತಿ ನಿರೂಪಣೆಯಲ್ಲಿ ವಿಶ್ವಾಸದ ನಿರ್ಮಾಣ" ಎಂಬುದು ಸಾರ್ವಜನಿಕ ನೀತಿ ನಿರೂಪಣೆಯಲ್ಲಿ ನಿಖರತೆಯ ಮಹತ್ವವನ್ನು ಸಾರುತ್ತದೆ ಎಂದು ಅವರು ಹೇಳಿದರು. ಭಾರತವು ಸಿಂಧೂ ನಾಗರಿಕತೆಯ ಕಾಲದಿಂದಲೂ ಏಕರೂಪದ ಮಾಪನ ಪದ್ಧತಿಯನ್ನು ಹೊಂದಿದ್ದು, ಸದ್ಯ ರಾಷ್ಟ್ರೀಯ ಕಾನೂನು ಮಾಪನಶಾಸ್ತ್ರ ಪೋರ್ಟಲ್ ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಸಚಿವರು ಮಾಹಿತಿ ನೀಡಿದರು. ಅಂತರರಾಷ್ಟ್ರೀಯ ಕಾನೂನು ಮಾಪನಶಾಸ್ತ್ರ ಸಂಸ್ಥೆಯ ಅನುಮೋದಿತ ಪ್ರಮಾಣಪತ್ರಗಳನ್ನು ನೀಡುವ ವಿಶ್ವದ ೧೩ನೇ ದೇಶವಾಗಿ ಭಾರತ ಹೊರಹೊಮ್ಮಿರುವುದು ಜಾಗತಿಕ ಮನ್ನಣೆಯನ್ನು ಹೆಚ್ಚಿಸಿದೆ ಎಂದು ಸಚಿವರು ತಿಳಿಸಿದರು.

<><><><>

ಚೀನಾ ಅಧ್ಯಕ್ಷ ಕ್ಷಿ ಜಿನ್‌ಪಿಂಗ್ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಇಂದು ಬೀಜಿಂಗ್‌ನಲ್ಲಿ ಉನ್ನತ ಮಟ್ಟದ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಸಭೆಯಲ್ಲಿ, ಉಭಯ ದೇಶಗಳ ಬಾಂಧವ್ಯ, ಇರಾನ್ ಬಿಕ್ಕಟ್ಟು, ಉಕ್ರೇನ್ ಸಂಘರ್ಷ ಹಾಗೂ ಅಂತಾರಾಷ್ಟ್ರೀಯ ವ್ಯಾಪಾರ ಸೇರಿದಂತೆ ಪ್ರಮುಖ ಜಾಗತಿಕ ವಿದ್ಯಮಾನಗಳ ಕುರಿತು ಸುದೀರ್ಘ ಚರ್ಚೆ ನಡೆಸಲಾಯಿತು. ವಿಶ್ವಸಂಸ್ಥೆ, ಎಸ್‌ಸಿಒ ಮತ್ತು ಬ್ರಿಕ್ಸ್ ನಂತಹ ಜಾಗತಿಕ ವೇದಿಕೆಗಳ ಮೂಲಕ ಚೀನಾ ಮತ್ತು ರಷ್ಯಾ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ಈ ಮಾತುಕತೆ ನೆರವಾಗಲಿದೆ ಎಂದು ಚೀನಾದ ವಿದೇಶಾಂಗ ಸಚಿವಾಲಯ ತಿಳಿಸಿದೆ. ವ್ಯಾಪಾರ, ಇಂಧನ ಮತ್ತು ಭದ್ರತಾ ವಲಯಗಳಲ್ಲಿ ಉಭಯ ದೇಶಗಳ ಸಹಕಾರ ನಿರಂತರವಾಗಿ ವೃದ್ಧಿಸುತ್ತಿದ್ದು, ದ್ವಿಪಕ್ಷೀಯ ವ್ಯಾಪಾರವು ಈಗಾಗಲೇ ೨೦೦ ಬಿಲಿಯನ್ ಡಾಲರ್ ಗಡಿಯನ್ನು

ದಾಟಿದೆ ಎಂದು ನಾಯಕರು ಈ ಸಂದರ್ಭದಲ್ಲಿ ಹರ್ಷ ವ್ಯಕ್ತಪಡಿಸಿದರು. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಚೀನಾಕ್ಕೆ ಭೇಟಿ ನೀಡಿ ಕ್ಷಿ ಜಿನ್‌ಪಿಂಗ್ ಅವರೊಂದಿಗೆ ಪ್ರಾದೇಶಿಕ ವಿದ್ಯಮಾನಗಳ ಕುರಿತು ಚರ್ಚಿಸಿದ ಬೆನ್ನಲ್ಲೇ ಈ ಮಹತ್ವದ ರಷ್ಯಾ-ಚೀನಾ ಶೃಂಗಸಭೆ ನಡೆದಿದೆ.

<><><>

ಚೀನಾದ ಹಲವು ಭಾಗಗಳಲ್ಲಿ ಸಂಭವಿಸಿದ ಭೀಕರ ಮಳೆ ಮತ್ತು ಪ್ರವಾಹದಿಂದಾಗಿ ಕನಿಷ್ಠ ೧೨ ಜನರು ಮೃತಪಟ್ಟಿದ್ದಾರೆ ಮತ್ತು ಹಲವರು ನಾಪತ್ತೆಯಾಗಿದ್ದಾರೆ. ದೇಶದ ಹುನಾನ್, ಹುಬೈ ಮತ್ತು ಗುಯಿಝೌ ಪ್ರಾಂತ್ಯಗಳು ಪ್ರವಾಹದಿಂದ ಅತ್ಯಂತ ತೀವ್ರವಾಗಿ ಹಾನಿಗೊಳಗಾಗಿವೆ ಎಂದು ಅಲ್ಲಿನ ಸರ್ಕಾರಿ ಮಾಧ್ಯಮಗಳು ವರದಿ ಮಾಡಿವೆ. ಮಧ್ಯ ಚೀನಾದ ಹುನಾನ್ ಪ್ರಾಂತ್ಯದ ಶಿಮೆನ್ ಕೌಂಟಿಯಲ್ಲಿ ಮುಸಲಧಾರೆ ಮಳೆಯಿಂದಾಗಿ ಉಂಟಾದ ಪ್ರವಾಹಕ್ಕೆ ಸಿಲುಕಿ ಐದು ಜನರು ಸಾವನ್ನಪ್ಪಿದ್ದು, ೧೧ ಮಂದಿ ನಾಪತ್ತೆಯಾಗಿದ್ದಾರೆ. ಪ್ರವಾಹ ಪೀಡಿತ ಪ್ರದೇಶಗಳಲ್ಲಿ ರಕ್ಷಣಾ ಕಾರ್ಯಾಚರಣೆ ಚುರುಕಾಗಿ ನಡೆಯುತ್ತಿದ್ದು, ಈಗಾಗಲೇ ೧೯ ಸಾವಿರಕ್ಕೂ ಹೆಚ್ಚು ನಿವಾಸಿಗಳನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. ಕೆಲವು ಪ್ರದೇಶಗಳಲ್ಲಿ ದಾಖಲೆ ಪ್ರಮಾಣದ ಮಳೆಯಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

<><><>

ನಿನ್ನೆ ನಿಧರನಾದ ಉತ್ತರಾಖಂಡದ ಮಾಜಿ ಮುಖ್ಯಮಂತ್ರಿ, ನಿವೃತ್ತ ಮೇಜರ್ ಜನರಲ್ ಭುವನ್ ಚಂದ್ರ ಖಂಡೂರಿ ಅವರಿಗೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಮತ್ತು ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಸೇರಿದಂತೆ ಹಲವು ಗಣ್ಯರು ಡೆಹ್ರಾಡೂನ್‌ನಲ್ಲಿ ಅಂತಿಮ ನಮನ ಸಲ್ಲಿಸಿದರು. ಅವರ ಅಂತ್ಯಕ್ರಿಯೆಯು ಇಂದು ಹರಿದ್ವಾರದಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಲಿದೆ.

<><><>

ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ, ಕೋಲ್ಕತ್ತಾ ನೈಟ್ ರೈಡರ್ಸ್ ಮುಂಬೈ ಇಂಡಿಯನ್ಸ್ ತಂಡವನ್ನು ಎದುರಿಸಲಿದೆ. ಪಂದ್ಯವು ಸಂಜೆ ೭:೩೦ ಕ್ಕೆ ಪ್ರಾರಂಭವಾಗಲಿದೆ. ಜೈಪುರದ ಸವಾಯ್ ಮಾನ್ಸಿಂಗ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ತಂಡವು ಲಕ್ನೋ ಸೂಪರ್ ಜೈಂಟ್ಸ್ ತಂಡವನ್ನು ೭ ವಿಕೆಟ್‌ಗಳಿಂದ ಮಣಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>